## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:– ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಮುಂಬಡ್ತಿ ಸಮಿತಿ ರಚನೆ ಮಾಡುವ ಬಗ್ಗೆ.

ಓದಲಾಗಿದೆ:–
1) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 12 ಎಸ್‌ಡಿಇ 2007, ದಿನಾಂಕ:29/01/2008.
2) ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 250 ಡಿಪಿಐ 2006, ದಿನಾಂಕ:22/02/2008.
3) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ರವರ ಪ್ರಸ್ತಾವನೆ ಸಂಖ್ಯೆ: ಸಿ1(2)ಇ.ಮು.ಸ–07/2008–09, ದಿನಾಂಕ:23/07/2008. ಮತ್ತು 19/12/2008

ಪ್ರಸ್ತಾವನೆ:–

ಮೇಲೆ ಓದಲಾದ ಉಲ್ಲೇಖ (1) ರ ದಿನಾಂಕ:29/01/2008 ರ ಸರ್ಕಾರದ ಅಧಿಸೂಚನೆ ಹಾಗೂ ಉಲ್ಲೇಖ (2) ದಿನಾಂಕ:22/02/2008 ರ ಸರ್ಕಾರದ ಸುತ್ತೋಲೆಯನ್ವಯ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ಮತ್ತು ಹೆಚ್ಚುವರಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ, ಇವರುಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ, ಗ್ರೂಪ್–'ಬಿ' ವೃಂದಗಳಿಗೆ ನೇಮಕಾತಿ ಪ್ರಾಧಿಕಾರವೆಂದು ನಿಗಧಿಪಡಿಸಿ, ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ (3) ರ ದಿನಾಂಕ:19/12/2008 ರ ಪ್ರಸ್ತಾವನೆಯಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ರವರು ಸಾರ್ವಜನಿಕ ಶಿಕ್ಷಣ ಇಲಾಖೆಯ, ಗ್ರೂಪ್–'ಬಿ' ವೃಂದದ ಹುದ್ದೆಗಳಿಗೆ ಬಡ್ತಿ ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸಬೇಕಾಗಿರುವುದರಿಂದ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ಮತ್ತು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ, ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸಿ, ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರವು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪ್ರಸ್ತಾವನೆಯನ್ನು ಕೂಲಂಕುಶವಾಗಿ ಪರಿಶೀಲಿಸಿ, ಈ. ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 464 ಡಿಪಿಐ 2008, ಬೆಂಗಳೂರು, ದಿನಾಂಕ:06/01/2009**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ಮತ್ತು ಹೆಚ್ಚುವರಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ, ಇವರುಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ, ಗ್ರೂಪ್-'ಬಿ' ವೃಂದದ ಹುದ್ದೆಗಳಿಗೆ ಬಡ್ತಿ ನೀಡುವ ಸಲುವಾಗಿ ಈ ಕೆಳಕಂಡ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸಿ, ಆದೇಶಿಸಲಾಗಿದೆ.

**ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು:-**

| ಕ್ರಮ ಸಂಖ್ಯೆ | ಹುದ್ದೆ | ಸಮಿತಿಯಲ್ಲಿನ ಪದನಾಮ |
|---|---|---|
| 1) | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಅಧ್ಯಕ್ಷರು |
| 2) | ನಿರ್ದೇಶಕರು (ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| 3) | ಸಹ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯ ಕಾರ್ಯದರ್ಶಿ |

**ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ:-**

| ಕ್ರಮ ಸಂಖ್ಯೆ | ಹುದ್ದೆ | ಸಮಿತಿಯಲ್ಲಿನ ಪದನಾಮ |
|---|---|---|
| 1) | ಹೆಚ್ಚುವರಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ. | ಅಧ್ಯಕ್ಷರು |
| 2) | ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ. | ಸದಸ್ಯರು |
| 3) | ಸಹ ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ. | ಸದಸ್ಯ ಕಾರ್ಯದರ್ಶಿ |

ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ:-

| ಕ್ರಮ ಸಂಖ್ಯೆ | ಹುದ್ದೆ | ಸಮಿತಿಯಲ್ಲಿನ ಪದನಾಮ |
|---|---|---|
| 1) | ಹೆಚ್ಚುವರಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ | ಅಧ್ಯಕ್ಷರು |
| 2) | ನಿರ್ದೇಶಕರು, ಹೆಚ್ಚುವರಿ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ. | ಸದಸ್ಯರು |
| 3) | ಸಹ ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ. | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಟಿ.ಜಯರಾಂ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಸೇವೆಗಳು-1,2)

ಇವರಿಗೆ:-
ಸಂಕಲನಕರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.

ಪ್ರತಿಯನ್ನು:-
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.